# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 462 |
| 2 | ಸದಸ್ಯರ ಹೆಸರು | : | ಮುನಿರಾಜು ಗೌಡ ಎಂ.ಪಿ.<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 07-12-2023 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೈಗಾರಿಕಾ ತ್ಯಾಜ್ಯ ಹಾಗೂ ಬಯೋ ಮೆಡಿಕಲ್ ತ್ಯಾಜ್ಯ ಸಂಸ್ಕರಣೆ ಮಾಡಲು ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನಗಳು ಯಾವುವು; | ಕೈಗಾರಿಕಾ ತ್ಯಾಜ್ಯ ಹಾಗೂ ಜೀವ ವೈದ್ಯಕೀಯ ತ್ಯಾಜ್ಯ ಸಂಸ್ಕರಣೆ ಮಾಡುವ ಘಟಕಗಳು ಮಂಡಳಿಯಿಂದ ಈ ಕೆಳಕಂಡ ಕಾಯ್ದೆಗಳು ಅನ್ವಯಿಸುತ್ತವೆ.<br>1. ಜಲ (ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ 1974.<br>2. ವಾಯು (ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ 1981.<br>3. ಜೀವ ವೈದ್ಯಕೀಯ ತ್ಯಾಜ್ಯ ವಸ್ತು ನಿರ್ವಹಣೆ ನಿಯಮ, 2016.<br>4. ಅಪಾಯಕಾರಿ ಮತ್ತು ಇತರ ತ್ಯಾಜ್ಯಗಳ (ವ್ಯವಸ್ಥಾಪನೆ ಮತ್ತು ಅಂತರ್ ಗಡಿ ಸಾಗಣೆ) ನಿಯಮಗಳು, 2016 |
| ಆ) | ಬಿ.ಬಿ.ಎಂ.ಪಿ ವ್ಯಾಪ್ತಿಯ ಎಷ್ಟು ಕೈಗಾರಿಕೆ ಮತ್ತು ಆಸ್ಪತ್ರೆಗಳು ಸಂಸ್ಕರಣಾ ಘಟಕಗಳ ನಡುವೆ ಒಪ್ಪಂದ ಮಾಡಿಕೊಳ್ಳದವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು; | ಒಪ್ಪಂದ ಮಾಡಿಕೊಳ್ಳದ ಸಂಸ್ಥೆಗಳಿಗೆ ಮಂಡಳಿಯು ಅಧಿಕಾರ ಪತ್ರ ನೀಡುವುದಿಲ್ಲ. 2022 ರಲ್ಲಿ ಈ ಕಾರಣದಿಂದ 34 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. |
| ಇ) | ಬಿ.ಬಿ.ಎಂ.ಪಿ ವ್ಯಾಪ್ತಿಯ ಅಂಜನಾಪುರ, ಗೊಲ್ಲಹಳ್ಳಿ, ಗೊಟ್ಟಿಗೆರೆ ಕೆಂಬತ್ತಹಳ್ಳಿಯ ಕಲ್ಲು ಕ್ವಾರಿಗಳಲ್ಲಿ ಆಸ್ಪತ್ರೆಗಳ ಬಯೋ ತ್ಯಾಜ್ಯ ಸುರಿಯುತ್ತಿರುವ ಬಗ್ಗೆ ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡಿದ್ದರೂ ಸಹ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಆಸ್ಪತ್ರೆಗಳ ಮತ್ತು ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು; | ಬಿ.ಬಿ.ಎಂ.ಪಿ ವ್ಯಾಪ್ತಿಯ ಅಂಜನಾಪುರ, ಗೊಲ್ಲಹಳ್ಳಿ, ಗೊಟ್ಟಿಗೆರೆ ಕೆಂಬತ್ತಳ್ಳಿಯ ಕಲ್ಲು ಕ್ವಾರಿಗಳಲ್ಲಿ ಆಸ್ಪತ್ರೆಗಳ ಬಯೋತ್ಯಾಜ್ಯ ಸುರಿಯುತ್ತಿರುವ ಬಗ್ಗೆ ದಿಲೀಪ್ ಮತ್ತು ಕಮರುಲ್ಲ ಎಂಬುವವರಿಗೆ ವಿವಿಧ ಪ್ರಕರಣಗಳಲ್ಲಿ ರೂ.10,000/-ಗಳ ದಂಡವನ್ನು ವಿಧಿಸಲಾಗಿರುತ್ತದೆ.<br>ಕೆಂಬತ್ತಹಳ್ಳಿ ಗ್ರಾಮದ ಸರ್ವೆ ನಂ-85 ರಲ್ಲಿ ಅವೈಜ್ಞಾನಿಕವಾಗಿ ಆಸ್ಪತ್ರೆ ತ್ಯಾಜ್ಯ ವಿಲೇವಾರಿ ಮಾಡಿರುವ ಬಗ್ಗೆ ಸಂಬಂಧಿತ ಕೈಗಾರಿಕೆ ಮತ್ತು ಆಸ್ಪತ್ರೆಗಳ ವಿಚಾರಣೆ ನಡೆಸಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ನಿರ್ದೇಶನ ನೀಡಿದ್ದು, ಸ್ಥಳದಲ್ಲಿದ್ದ ಜೀವ ವೈದ್ಯಕೀಯ ತ್ಯಾಜ್ಯಗಳನ್ನು ಸಂಗ್ರಹಿಸಿ ಆ ಕೈಗಾರಿಕೆ ಮತ್ತು ಆಸ್ಪತ್ರೆಯವರೇ ವೈಜ್ಞಾನಿಕವಾಗಿ ವಿಲೇವಾರಿ ಮಾಡಿದ ವರದಿಯನ್ನು ಮಂಡಳಿಗೆ ನೀಡಿರುತ್ತಾರೆ. ಈ ಸಂಸ್ಥೆಗಳವರಿಗೆ ಎಚ್ಚರಿಕೆ ನೀಡಿ, ವೈಜ್ಞಾನಿಕ ರೀತಿಯಲ್ಲಿ ಮಾತ್ರ ವಿಲೇವಾರಿ ಮಾಡಲು ಮುಚ್ಚಳಿಕೆ ಪತ್ರ ಪಡೆಯಲಾಗಿದೆ. |

| | | |
|---|---|---|
| ಈ) | ಆಸ್ಪತ್ರೆಗಳ ಕೈಗಾರಿಕೆಗಳ ಅಪಾಯಕಾರಿ ತ್ಯಾಜ್ಯವನ್ನು ಸಮರ್ಪಕವಾದ ರೀತಿಯಲ್ಲಿ ಸಂಸ್ಕರಣೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? | ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಕೈಗಾರಿಕೆಗಳು ಮತ್ತು ಆಸ್ಪತ್ರೆಗಳನ್ನು ಆಗಾಗ್ಗೆ ಪರಿವೀಕ್ಷಣೆ ನಡೆಸಿ ಅಪಾಯಕಾರಿ ಮತ್ತು ಇತರ ತ್ಯಾಜ್ಯಗಳ (ವ್ಯವಸ್ಥಾಪನೆ ಮತ್ತು ಅಂತರ್‌ಗಡಿ ಸಾಗಣೆ) ನಿಯಮಗಳು, 2016 ಮತ್ತು ಜೀವ-ವೈದ್ಯಕೀಯ ತ್ಯಾಜ್ಯ ನಿರ್ವಹಣೆ ನಿಯಮಗಳು, 2016ರಡಿ ಷರತ್ತುಗಳನ್ನು ಪಾಲನೆ ಮಾಡುತ್ತಿರುವುದನ್ನು ಖಾತ್ರಿಪಡಿಸಿ ಕೊಳ್ಳುತ್ತಿದೆ. ಉಲ್ಲಂಘನೆ ಮಾಡಿದ ಸಂದರ್ಭದಲ್ಲಿ ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳುತ್ತಿದೆ. |

**ಚಅಇ 417 ಎಂಎನ್‌ವೈ 2023**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ